# <u>ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಪನಹಳ್ಳಿ</u>

ಸಿ ಸಿ ನಂಬರ 1246/2023

| | | | |
|---|---|---|---|
| ಸಿಡಬ್ಲ್ಯೂ | 7 | ಪಿಡಬ್ಲ್ಯೂ | 3 |

ಸಾಕ್ಷಿದಾರರ ಹೆಸರು : ಅಂಜಿನಪ್ಪ

ತಂದೆಯ ಹೆಸರು : ಹೊನ್ನಪ್ಪ

ವಯಸ್ಸು : 39 ವರ್ಷ ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು 20.12.2025

ಉದ್ಯೋಗ : ವ್ಯವಸಾಯ

ವಾಸ ಸ್ಥಳ : ಓಬಳಾಪುರ

**<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:-</u>**

ನನಗೆ ಆರೋಪಿತನ ಪರಿಚಯ ಇರುತ್ತದೆ. ಆರೋಪಿಯು ನಮ್ಮ ಊರಿನವನು ಆಗಿರುತ್ತಾನೆ. ಈಗ್ಗೆ 2 ವರ್ಷದ ಹಿಂದೆ ನಾನು ಕೂಲಿ ಕೆಲಸಕ್ಕೆ ಹೋಗುತ್ತಿರುವಾಗ ಪೋಲೀಸರು ನನ್ನನ್ನು ಕರೆದಿರುತ್ತಾರೆ. ಪೋಲೀಸರ ಕೋರಿಕೆಯ ಮೇರೆಗೆ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯು ಮಹಜರ ಆಗಿದ್ದು ಅದನ್ನು ಈಗ ನಿ ಪಿ 4 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿ ಪಿ 4(ಎ) ಎಂದು ಗುರುತಿಸಲಾಯಿತು. ನಿ ಪಿ 1 ರಲ್ಲಿ ಏನ ಬರೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ. ಆ ದಿನ ಸ್ಥಳದಲ್ಲಿ ಪೋಲೀಸರು ಒಂದು ಪೋಟೋವನ್ನು ತೆಗೆದಿರುತ್ತಾರೆ. ಯಾವ ಕಾರಣಕ್ಕಾಗಿ ಪೋಟೋಗಳನ್ನು ತೆಗೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ. ಸದರಿ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲಾ. ಯಾವ ಒಬ್ಬ ವ್ಯಕ್ತಿಯು ಸಹ ಪೋಲೀಸರಿಗೆ ಯಾವುದೇ ಸ್ಥಳವನ್ನು ತೋರಿಸಿರುವುದಿಲ್ಲಾ.

**(ಈ ವೇಳೆಯಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಸದರಿ ಸಾಕ್ಷಿಯು ಪೋಲೀಸರಿಗೆ ಕೊಟ್ಟಿರುವುದಾಗಿ ಹೇಳಲಾದ ಹೇಳಿಕೆಯನ್ನು ಪರಿಶೀಲಿಸಲಾಯಿತು. ಅದರಲ್ಲಿರುವ ಸಂಗತಿಗಳಿಗೆ ವ್ಯತಿರಿಕ್ತವಾಗಿ ಸಾಕ್ಷಿದಾರರು ಪುರಾವೆ ಹೇಳಿರುವುದರಿಂದ ಇವರನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ನ್ಯಾಯಾಲಯವು ಸಹಾಯಕ ಸರ್ಕಾರಿ ಅಭಿಯೋಜಕರಿಗೆ ಪಾಟೀ ಸವಾಲು ಮಾಡಲು ಅನುಮತಿಯನ್ನು ಕಲ್ಪಿಸಲಾಗಿದೆ.)**

**<u>ಪಾಟೀ ಸವಾಲು ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-</u>**

ದಿನಾಂಕ 05.06.2023 ರಂದು ನಿಚ್ಚಾಪುರ ಗ್ರಾಮ ದಿಂದ ಓಬಳಾಪುರ ಗ್ರಾಮಕ್ಕೆ ಹೋಗುವ ಟಾರ್ ರಸ್ತೆ ಪಕ್ಕದಲ್ಲಿ ಇರುವ ಗಾಣಗೇರಿ ಪರಮೇಶಪ್ಪ ಮತ್ತು ಅಶ್ವಥಪ್ಪನವರ ಹೊಲಗಳ ಮಧ್ಯದಲ್ಲಿ ಇರುವ ಬಂಡಿ ಜಾಡಿನ ರಸ್ತೆಯಲ್ಲಿ ನನ್ನ ಮತ್ತು ಚಾ ಸಾ 8 ರವರ ಸಮಕ್ಷಮ ಆರೋಪಿ ತೋರಿಸಿದ ಸ್ಥಳದಲ್ಲಿ ಮಧ್ಯಾಹ್ನ 12.05 ರಿಂದ 1.15 ರ ವರೆಗೆ ನಿ ಪಿ 4 ಆರೋಪಿ ತೋರಿಸಿದ ಕೃತ್ಯಸ್ಥಳದ ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿ ಪಿ 4 ರಲ್ಲಿ ಬರೆದಿರವ ಸಂಗತಿಗಳ ಬಗ್ಗೆ ಗೊತ್ತಿದ್ದರೂ ಮತ್ತು ಆ ಸಮಯದಲ್ಲಿ ನಾನು ಇರುವಂತಹ ಪೋಟೋವನ್ನು ತೆಗೆದಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ- ಇಲ್ಲ.</u>**

ಮರು ವಿಚಾರಣೆ ಇಲ್ಲಾಃ-

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಗಣಕೀಕೃತ ಗೊಳಿಸಲಾಯಿತು.)

ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ
ನ್ಯಾಯಾಧೀಶರು, ಹರಪನಹಳ್ಳಿ.